# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 704 |
| ಸದಸ್ಯರ ಹೆಸರು : | ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ : | 13.12.2024 |
| ಉತ್ತರಿಸುವ ಸಚಿವರು : | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 3 ವರ್ಷಗಳಿಂದ ಹಿಂದುಳಿದ ವರ್ಗದ ಕಲ್ಯಾಣ ಇಲಾಖೆಯ ವತಿಯಿಂದ ಇಲ್ಲಿಯವರೆಗೂ ಪದವಿ ಮತ್ತು ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿರುವವರಿಗೆ ಎಷ್ಟು ವಿದ್ಯಾರ್ಥಿವೇತನವನ್ನು ನೀಡಲಾಗಿದೆ; (ಜಿಲ್ಲಾವಾರು ವಿವರಗಳನ್ನು ಒದಗಿಸುವುದು) | ಕಳೆದ 3 ವರ್ಷಗಳಿಂದ ಹಿಂದುಳಿದ ವರ್ಗದ ಕಲ್ಯಾಣ ಇಲಾಖೆಯ ವತಿಯಿಂದ ಇಲ್ಲಿಯವರೆಗೂ ಪದವಿ ಮತ್ತು ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿರುವವರಿಗೆ ನೀಡಿರುವ ವಿದ್ಯಾರ್ಥಿವೇತನದ ಜಿಲ್ಲಾವಾರು ವಿವರಗಳನ್ನು ಅನುಬಂಧ-1 ರಲ್ಲಿ ಒದಗಿಸಿದೆ. |
| ಆ) | ವಿದ್ಯಾರ್ಥಿ ವೇತನಕ್ಕಾಗಿ ಎಷ್ಟು ಅರ್ಜಿಗಳು ರಾಜ್ಯದಲ್ಲಿ ಸಂಗ್ರಹವಾಗಿದೆ; ವಿದ್ಯಾರ್ಥಿವೇತನ ನೀಡಬೇಕಾದರೆ ಸರ್ಕಾರ ನಿಗಧಿಪಡಿಸಿರುವ ಮಾನದಂಡವೇನು; | 2024-25 ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಗಳಡಿ ದಿನಾಂಕ:04.12.204 ರ ವರೆಗೆ 573423 ಅರ್ಜಿಗಳು ಸ್ವೀಕೃತವಾಗಿರುತ್ತವೆ.<br>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ವಿದ್ಯಾರ್ಥಿ ವೇತನ ಪಡೆಯಲು ನಿಗದಿಪಡಿಸಿದ ಮಾನದಂಡಗಳ ವಿವರಗಳನ್ನು ಅನುಬಂಧ-2 ರಲ್ಲಿ ಒದಗಿಸಿದೆ. |
| ಇ) | 2023-24ನೇ ಸಾಲಿನಲ್ಲಿ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿ ಒಂದು ವರ್ಷವಾದರೂ ವಿದ್ಯಾರ್ಥಿ ವೇತನ ನೀಡದಿರುವುದರಿಂದ, ವಿದ್ಯಾರ್ಥಿಗಳಿಗೆ ಮುಂದಿನ ವಿದ್ಯಾಭ್ಯಾಸಕ್ಕೆ ತೊಂದರೆಯಾಗುವುದು ಸರ್ಕಾರದ | 2023-24ನೇ ಸಾಲಿನಲ್ಲಿ ಬಾಕಿ ಇದ್ದ ವಿದ್ಯಾರ್ಥಿಗಳಿಗೆ 2024-25ನೇ ಸಾಲಿನಲ್ಲಿ ಶುಲ್ಕ ಮರುಪಾವತಿ ಕಾರ್ಯಕ್ರಮದಡಿ ಬಿಡುಗಡೆಯಾಗುವ ಅನುದಾನದಲ್ಲಿ ಶುಲ್ಕ ಮರುಪಾವತಿ ಮಾಡಲು |

| | | |
|---|---|---|
| | ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರದ ಕ್ರಮವೇನು | ಕ್ರಮವಹಿಸಲಾಗುತ್ತಿದ್ದು, ಪಾವತಿ ಪ್ರಕ್ರಿಯೆ ಪ್ರಗತಿಯಲ್ಲಿದೆ. |

**ಸಂಖ್ಯೆ**:ಹಿಂವಕ 961 ಬಿಂಎಂಎಸ್ 2024

**( ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು
ಸಂಸ್ಕೃತಿ ಇಲಾಖೆ ಸಚಿವರು

**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಹೆ.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 704 ಕ್ಕೆ ಅನುಬಂಧ-1**

| ಕ್ರ.ಸಂ | ಜಿಲ್ಲೆಯ ಹೆಸರು | 2021-22 | | 2022-23 | | 2023-24 | |
|---|---|---|---|---|---|---|---|
| | | ಪಾವತಿಯಾದ ವಿದ್ಯಾರ್ಥಿಗಳ ಸಂಖ್ಯೆ | ಪಾವತಿಯಾದ ಮೊತ್ತ | ಪಾವತಿಯಾದ ವಿದ್ಯಾರ್ಥಿಗಳ ಸಂಖ್ಯೆ | ಪಾವತಿಯಾದ ಮೊತ್ತ | ಪಾವತಿಯಾದ ವಿದ್ಯಾರ್ಥಿಗಳ ಸಂಖ್ಯೆ | ಪಾವತಿಯಾದ ಮೊತ್ತ |
| 1 | ಬಾಗಲಕೋಟೆ | 18916 | 127481060 | 21340 | 144112201 | 19126 | 120716022 |
| 2 | ಬಳ್ಳಾರಿ | 11749 | 124289236 | 8924 | 98532016 | 5960 | 77716362 |
| 3 | ಬೆಳಗಾವಿ | 45678 | 308153787 | 44470 | 289719352 | 40543 | 279751808 |
| 4 | ಬೆಂಗಳೂರು ಗ್ರಾಮಾಂತರ | 6691 | 72451750 | 5552 | 62204837 | 4285 | 55255122 |
| 5 | ಬೆಂಗಳೂರು ನಗರ | 95177 | 1552995727 | 73173 | 1216275527 | 53749 | 1005078255 |
| 6 | ಬೀದರ್ | 11547 | 110843307 | 8868 | 89174190 | 6839 | 66609671 |
| 7 | ಚಾಮರಾಜನಗರ | 4801 | 40693313 | 4369 | 42452552 | 3778 | 36178918 |
| 8 | ಚಿಕ್ಕಬಳ್ಳಾಪುರ | 8184 | 69795037 | 7675 | 70318055 | 5773 | 64709768 |
| 9 | ಚಿಕ್ಕಮಗಳೂರು | 7110 | 47613300 | 6371 | 46151591 | 4789 | 41635017 |
| 10 | ಚಿತ್ರದುರ್ಗ | 9484 | 62583302 | 8123 | 57239471 | 6319 | 43632344 |
| 11 | ದಕ್ಷಿಣ ಕನ್ನಡ | 21576 | 256549934 | 15123 | 185007219 | 11669 | 166900383 |
| 12 | ದಾವಣಗೆರೆ | 18648 | 190414409 | 16248 | 166292368 | 13507 | 138527009 |
| 13 | ಧಾರವಾಡ | 26277 | 241586568 | 23878 | 218663604 | 19801 | 207068255 |
| 14 | ಗದಗ | 12563 | 92700666 | 10561 | 82529363 | 8601 | 56601151 |
| 15 | ಹಾಸನ | 21768 | 179182546 | 19798 | 175313141 | 14907 | 164744502 |
| 16 | ಹಾವೇರಿ | 11895 | 61231036 | 10945 | 60632706 | 9475 | 58866664 |
| 17 | ಕಲಬುರ್ಗಿ | 27484 | 271742358 | 20523 | 197044622 | 16176 | 157940314 |
| 18 | ಕೊಡಗು | 3013 | 37217628 | 2681 | 39849345 | 1478 | 24005040 |
| 19 | ಕೋಲಾರ | 8136 | 51534172 | 6866 | 42671130 | 5424 | 41839112 |
| 20 | ಕೊಪ್ಪಳ | 11787 | 78209075 | 9746 | 73743375 | 8323 | 65036308 |
| 21 | ಮಂಡ್ಯ | 20456 | 220724853 | 19456 | 192437923 | 15236 | 174974964 |
| 22 | ಮೈಸೂರು | 43006 | 398327309 | 45497 | 439025645 | 34966 | 384226542 |
| 23 | ರಾಯಚೂರು | 14684 | 131177331 | 12507 | 109586808 | 8846 | 90619727 |
| 24 | ರಾಮನಗರ | 7767 | 60142428 | 7593 | 56045013 | 6597 | 65455426 |
| 25 | ಶಿವಮೊಗ್ಗ | 22188 | 165527005 | 20553 | 153865664 | 16280 | 142185141 |
| 26 | ತುಮಕೂರು | 26985 | 221359069 | 24341 | 210074216 | 17698 | 163036682 |
| 27 | ಉಡುಪಿ | 12367 | 78009215 | 10040 | 61101375 | 8141 | 40925160 |
| 28 | ಉತ್ತರಕನ್ನಡ | 11698 | 76762524 | 9865 | 68205833 | 8474 | 54181921 |
| 29 | ವಿಜಯನಗರ | 0 | 0 | 7858 | 43346425 | 6567 | 37855790 |
| 30 | ವಿಜಯಪುರ | 21540 | 128977291 | 17989 | 106907948 | 16268 | 91201847 |
| 31 | ಯಾದಗಿರಿ | 7732 | 45662580 | 6357 | 37291614 | 5159 | 44119668 |
| **ಒಟ್ಟು** | | **570907** | **5503937816** | **507290** | **4835815129** | **404754** | **4161594893** |

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು

## ಅನುಬಂಧ-2

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ವಿದ್ಯಾರ್ಥಿ ವೇತನ ಪಡೆಯಲು ನಿಗದಿಪಡಿಸಿದ ಮಾನದಂಡಗಳ ವಿವರಗಳು:

1 ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು.

2 ಕರ್ನಾಟಕ ರಾಜ್ಯದ ಶಾಸನಬದ್ಧ ವಿಶ್ವವಿದ್ಯಾಲಯಗಳ/ಡೀಮ್ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ, ಸರ್ಕಾರಿ/ಸ್ಥಳೀಯ ಸಂಸ್ಥೆ/ಅನುದಾನಿತ ಸಂಸ್ಥೆಗಳು/ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಸ್ಥಳೀಯ ಸಂಸ್ಥೆಗಳಲ್ಲಿ ನಿಯಮಿತ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಸರ್ಕಾರಿ ಕೋಟಾದಲ್ಲಿ ಸೀಟು ವಿದ್ಯಾರ್ಥಿಗಳಿಗೆ ಮಾತ್ರ ಶುಲ್ಕ ಮರುಪಾವತಿ ಪಡೆಯಲು ಅರ್ಹರಿರುತ್ತಾರೆ. (ದೂರ ಶಿಕ್ಷಣ, ಮುಕ್ತ ವಿಶ್ವವಿದ್ಯಾಲಯ, ಸಂಜೆ ಕಾಲೇಜು ಮತ್ತು ಮ್ಯಾನೇಜ್‌ಮೆಂಟ್ ಕೋಟಾದಡಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಸದರಿ ಕಾರ್ಯಕ್ರಮದಡಿ ಶುಲ್ಕ ಮರುಪಾವತಿ ಪಡೆಯಲು ಅರ್ಹರಿರುವುದಿಲ್ಲ).

3 ಈ ಮೇಲಿನ ಸೌಲಭ್ಯ ಪಡೆಯಲು ವಿದ್ಯಾರ್ಥಿಯ, ತಂದೆ-ತಾಯಿ/ಪೋಷಕರ ಕುಟುಂಬದ, ಒಟ್ಟು ವಾರ್ಷಿಕ ವರಮಾನ ಈ ಕೆಳಗೆ ನಿಗದಿಪಡಿಸಿದ ಗರಿಷ್ಠ ಮಿತಿಯೊಳಗೆ ಇರಬೇಕು.

4 ಹಿಂದುಳಿದ ವರ್ಗಗಳ ಪ್ರವರ್ಗ-1 ರ ವಿದ್ಯಾರ್ಥಿಗಳಿಗೆ - ರೂ.2.50 ಲಕ್ಷ, ಭಾರತ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಧಿಸೂಚಿಸಿರುವ, ಇತರ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿದ ಮತ್ತು ಎಲ್ಲಾ ಧರ್ಮಗಳ, ಜಾತಿಗಳ ಹಾಗೂ ಸಮುದಾಯಗಳ ವಿದ್ಯಾರ್ಥಿಗಳಿಗೆ - ರೂ.1.00 ಲಕ್ಷ. (ಆದರೆ, ಸಮಾಜ ಕಲ್ಯಾಣ ಪರಿಶಿಷ್ಟ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ವ್ಯಾಪ್ತಿಗೆ ಬರುವ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸೌಲಭ್ಯಗಳನ್ನು ಪಡೆಯಲು ಅರ್ಹರಿರುವುದಿಲ್ಲ)

5 ಸಮಾನ ಕೋರ್ಸುಗಳಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಅರ್ಹರಿರುವುದಿಲ್ಲ. (ಉದಾ: ಬಿ.ಎ ನಂತರ ಬಿ.ಕಾಂ, ಎಂ.ಎ (ಕನ್ನಡ) ನಂತರ ಎಂ.ಎ (ಇಂಗ್ಲೀಷ್), ಬಿ.ಎಡ್ ನಂತರ ಎಲ್.ಎಲ್.ಬಿ, ಇತ್ಯಾದಿಗಳಿಗೆ ಪ್ರವೇಶ ಪಡೆದಿದ್ದಲ್ಲಿ)

6 ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು, ಕೋರ್ಸಿನ ಅವಧಿಯಲ್ಲಿ ಮೆಡಿಕಲ್ ಪ್ರಾಕ್ಟಿಸ್ ಮಾಡುತ್ತಿದ್ದಲ್ಲಿ, ಅರ್ಹರಿರುವುದಿಲ್ಲ. ಈ ಸೌಲಭ್ಯಕ್ಕೆಕಲೆ, ವಿಜ್ಞಾನ, ಹಾಗೂ ವಾಣಿಜ್ಯ ಕೋರ್ಸುಗಳ, ಪದವಿ ಅಥವಾ ಸ್ನಾತಕೋತ್ತರ ಪದವಿಗಳಲ್ಲಿ ಉತ್ತೀರ್ಣ/ಅನುತ್ತೀರ್ಣರಾದವರು ಅಂಗೀಕೃತ ವೃತ್ತಿಪರ ಅಥವಾ ತಾಂತ್ರಿಕ ಸರ್ಟಿಫಿಕೇಟ್, ಡಿಪ್ಲೋಮ, ಪದವಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಹಾಗೂ ಇತರ ರೀತಿ ಅರ್ಹರಿದ್ದಲ್ಲಿ ಅವರು ಈ ಯೋಜನೆಯ ಅಡಿ ಸೌಲಭ್ಯಗಳಿಗೆ ಅರ್ಹರಿರುತ್ತಾರೆ. ಒಂದಕ್ಕಿಂತ ಹೆಚ್ಚು ಬಾರಿ ಕೋರ್ಸುಗಳ ಬದಲಾವಣೆ ಮಾಡಿಕೊಂಡವರು ಅರ್ಹರಿರುವುದಿಲ್ಲ.

7 ಒಂದೇ ಕುಟುಂಬದ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ, ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.